ಮಂಗಳಬಾಗಿಲಿನಲ್ಲಿರುವ ಆಸ್ಪತ್ರೆಯನ್ನು ಸಾರ್ವತ್ರಿಕ ಆಸ್ಪತ್ರೆಯನ್ನಾಗಿ ಮಾಡುವ ಬಗ್ಗೆ.

೧೬೦೩. ಶ್ರೀ ಆರ್. ವೆಂಕಟರಾಮಯ್ಯ (ಮುಳಬಾಗಿಲು).—ಮಾನ್ಯ ಆರೋಗ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಮುಳಬಾಗಿಲುನಲ್ಲಿರುವ ಆಸ್ಪತ್ರೆಯನ್ನು ಸಾರ್ವತ್ರಿಕ ಆಸ್ಪತ್ರೆಯನ್ನಾಗಿ ಮಾಡಲು ಮತ್ತು ಹಾಸಿಗೆ ಸಂಖ್ಯೆ ಬಲವನ್ನು ಜಾಸ್ತಿ ಮಾಡಲು ಭರವಸೆ, ನೀಡಿರುವುದು ನಿಜವೆ ?

ಆ) ಮುಳಬಾಗಿಲು ತಾಲ್ಲೂಕಿನಲ್ಲಿ ೨ ಲಕ್ಷ ಜನಸಂಖ್ಯೆಯಿದ್ದು ಸಾರ್ವತ್ರಿಕ ಆಸ್ಪತ್ರೆಯ ಅವಶ್ಯಕತೆ ಇರುವುದರಿಂದ ಸರ್ಕಾರದವರು ಈ ಆಸ್ಪತ್ರೆಗೆ ಹೆಚ್ಚಿನ ಅನುಕೂಲಗಳನ್ನು ನೀಡಲು ಕ್ರಮ ತೆಗೆದುಕೊಳ್ಳುವರೆ ?

ಶ್ರೀ ಹೆಚ್.ಎಲ್. ತಿಮ್ಮೇಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).—

ಅ) ಮಂಗಳಬಾಗಿಲು ನಗರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ೩೦ ಹಾಸಿಗೆಗಳ ಸಾರ್ವಜನಿಕ ಆಸ್ಪತ್ರೆಯನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.

ಆ) ಪರಿತೀಲಿಸಲಾಗುವುದು.

ಕೊಡಚಾದ್ರಿಯನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡುವುದು.

೧೧೯೯. ಶ್ರೀ ಬಿ. ಸ್ವಾಮಿರಾವ್ (ಹೊಸನಗರ).—ಮಾನ್ಯ ಯುವ ಜನ ಸೇವಾ ಕ್ರೀಡಾ ಹಾಗೂ ಪ್ರವಾಸೋದ್ಯಮ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೊಸನಗರ ತಾಲ್ಲೂಕು ಕೊಡಚಾದ್ರಿಯನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡುವ ಯೋಜನೆ ಯಾವ ಹಂತದಲ್ಲಿದೆ ?

ಆ) ಈ ಯೋಜನೆಗೆ ಖರ್ಚಾಗುವ ಹಣ ಎಷ್ಟು ?

ಇ) ಈ ಯೋಜನೆಯು ಯಾವಾಗ ಪೂರ್ಣಗೊಳ್ಳುವುದು ?

ಶ್ರೀ ಜೀವರಾಜ ಆಳ್ವ (ಮಾನ್ಯ ಯುವ ಜನ ಸೇವಾ ಕ್ರೀಡಾ ಹಾಗೂ ಪ್ರವಾಸೋದ್ಯಮ ರಾಜ್ಯ ಮಂತ್ರಿಗಳು).—

ಅ) ಕೊಡಚಾದ್ರಿಯನ್ನು ಈಗಾಗಲೇ ಪ್ರವಾಸಿ ಕೇಂದ್ರವೆಂದು ಗುರುತಿಸಲಾಗಿದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಪುತ್ತೂರು ಹಾಗೂ ಸೂಳ್ಯದಲ್ಲಿ ವೈದ್ಯಾಧಿಕಾರಿಗಳ ನೇಮಕಾತಿ ಬಗ್ಗೆ

೧೬೦೬. ಶ್ರೀ ಕೆ. ಕುಶಾಲ (ಸುಳ್ಯ).—ಮಾನ್ಯ ಆರೋಗ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ೧೯೮೫ ನೇ ಸೆಪ್ಟೆಂಬರ್ ತಿಂಗಳಿಂದ ಸೂಳ್ಯ ವಿಧಾನ ಸಭಾ ಕ್ಷೇತ್ರದ ಪುತ್ತೂರು ತಾಲ್ಲೂಕು ಹಾಗೂ ಸೂಳ್ಯದಲ್ಲಿ ವೈದ್ಯಾಧಿಕಾರಿಗಳ ನೇಮಕಾತಿ ನೀಡಿದ ಸಂಖ್ಯೆ ಎಷ್ಟು.

ಆ) ಇನ್ನು ಉಳಿದ ಹುದ್ದೆಗಳನ್ನು ಭರ್ತಿಮಾಡದಿರಲು ಕಾರಣಗಳೇನು.

ಇ) ಈ ವಿಧಾನ ಸಭಾ ಕ್ಷೇತ್ರದ ಎಂಟು ಆರೋಗ್ಯ ಘಟಕಗಳಿಗೆ ವೈದ್ಯಾಧಿಕಾರಿಗಳ ನೇಮಕಾತಿಯನ್ನು ಯಾವಾಗ ಮಾಡಲಾಗುವುದು ?